ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 101 ಆರ್‌ಜಿಯು 2012 (ಭಾಗ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ 24.08.2012

## ಸುತ್ತೋಲೆ

ಕೆಲವೊಂದು ಖಾಸಗಿ ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜುಗಳಲ್ಲಿ ಎಂಬಿಬಿಎಸ್ / ಬಿಡಿಎಸ್ ಕೋರ್ಸ್‌ಗೆ ಪ್ರವೇಶ ಪಡೆಯುತ್ತಿರುವ ಸಿ.ಇ.ಟಿ. ಮುಖಾಂತರ ಆಯ್ಕೆಗೊಂಡ ವಿದ್ಯಾರ್ಥಿಗಳಿಂದ ಕಾಲೇಜುಗಳ ಆಡಳಿತ ಮಂಡಳಿಯವರು ಅಧಿಕ ಶುಲ್ಕವನ್ನು ವಸೂಲಿ ಮಾಡುತ್ತಿರುವ ಬಗ್ಗೆ ದೂರುಗಳು ಸರ್ಕಾರದಲ್ಲಿ ಸ್ವೀಕೃತಗೊಂಡಿದ್ದು, ಇದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿ, ಸರ್ಕಾರವು ನಿಗದಿಪಡಿಸಿರುವ ಪ್ರವೇಶ ಶುಲ್ಕವನ್ನು ಮಾತ್ರ ಪಡೆಯುವಂತೆ ದಿನಾಂಕ 01.08.2012 ರ ಸುತ್ತೋಲೆ ಮುಖಾಂತರ ಎಲ್ಲಾ ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜುಗಳ ಆಡಳಿತ ಮಂಡಳಿಯವರಿಗೆ ಈಗಾಗಲೇ ಸೂಚನೆಗಳನ್ನು ನೀಡಲಾಗಿದೆ.

ಆದಾಗ್ಯೂ, ಇಂತಹ ವಿದ್ಯಾರ್ಥಿಗಳಿಂದ ಖಾಸಗಿ ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜುಗಳು ಅಧಿಕ ಶುಲ್ಕವನ್ನು ವಸೂಲಿ ಮಾಡುತ್ತಿರುವ ಬಗ್ಗೆ ಸರ್ಕಾರಕ್ಕೆ ಬರುತ್ತಿರುವ ದೂರುಗಳ ಸಂಖ್ಯೆಯು ಅಧಿಕವಾಗಿದ್ದು, ಸರ್ಕಾರವು ನೀಡಿರುವ ಸೂಚನೆಗಳನ್ನು / ಆದೇಶಗಳನ್ನು ಪಾಲಿಸದಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಅಧಿಕ ಶುಲ್ಕವನ್ನು ವಸೂಲಿ ಮಾಡಿರುವ / ಮಾಡುತ್ತಿರುವ **ಕಾಲೇಜುಗಳ ಮಾನ್ಯತೆಯನ್ನು ರದ್ದುಗೊಳಿಸುವ ಬಗ್ಗೆ** ಸರ್ಕಾರವು ಗಂಭೀರವಾಗಿ ಪರಿಶೀಲಿಸುತ್ತಿದೆ.

ಆದ್ದರಿಂದ, ಇಂತಹ ಪ್ರಕರಣಗಳಿಗೆ ಯಾವುದೇ ಆಸ್ಪದ ನೀಡದೆ ಸಿ.ಇ.ಟಿ. ಮುಖಾಂತರ ಆಯ್ಕೆಗೊಂಡ ವಿದ್ಯಾರ್ಥಿಗಳಿಂದ ಸರ್ಕಾರವು ನಿಗದಿಪಡಿಸಿರುವ ಶುಲ್ಕವನ್ನು ಮಾತ್ರ ಪಡೆಯುವಂತೆ ಮತ್ತೊಮ್ಮೆ ಖಾಸಗಿ ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜುಗಳ ಆಡಳಿತ ಮಂಡಳಿಯವರಿಗೆ ಈ ಮೂಲಕ ಎಚ್ಚರಿಕೆ ನೀಡಿದೆ. ಅಲ್ಲದೆ, ಇದು ಸರ್ಕಾರವು ನೀಡುತ್ತಿರುವ **ಅಂತಿಮ ಎಚ್ಚರಿಕೆ** ಎಂದೂ ಪರಿಗಣಿಸಲು ಸೂಚಿಸಿದೆ.

(ಮೆಹಬೂಬ್ ಖಾನ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

ಇವರಿಗೆ:

1. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ 4 ನೇ ಟಿ ಬ್ಲಾಕ್, ಬೆಂಗಳೂರು-560026.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು - 560009.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18 ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು - (ಈ ಸುತ್ತೋಲೆಯನ್ನು ಕೂಡಲೇ web-site ನಲ್ಲಿ upload ಮಾಡುವಂತೆ ಸೂಚಿಸಿದೆ).
4. ರಾಜ್ಯದ ಎಲ್ಲಾ ಖಾಸಗಿ / ಡೀಮ್ಡ್ ವಿಶ್ವವಿದ್ಯಾಲಯಗಳ ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ವೈದ್ಯಕೀಯ ಶಿಕ್ಷಣ ನಿರ್ದೇಶಕರ ಮುಖಾಂತರ.
5. ಸದಸ್ಯರು, ಏಕ ಸದಸ್ಯ ಸಮಿತಿ, ಬೆಂಗಳೂರು.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ), ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ), ವಿಕಾಸ ಸೌಧ, ಬೆಂಗಳೂರು.